## 75. ಸಾರಿಗೆ ಇಲಾಖೆ ಕಾರ್ಯ ವೈಖರಿಗೆ ಮೆಚ್ಚುಗೆ

ಪ್ರಯಾಣಿಕರಿಗೆ ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಾರಿಗೆ ಇಲಾಖೆ ಒಂದು ವರ್ಷದಲ್ಲಿ ಜಾರಿಗೊಳಿಸಿದ ಕಾರ್ಯಕ್ರಮಗಳು, ಕೋವಿಡ್-19ರ ಪಿಡುಗಿನ ನಡುವೆಯೂ ಸುರಕ್ಷಿತ ಸಾರಿಗೆ ಸೇವೆ ಒದಗಿಸುತ್ತಿರುವ ಇಲಾಖೆ ಸಾಧನೆಯ ಮಾಹಿತಿ ಒಳಗೊಂಡ 'ಸಾರಿಗೆ ಮಿತ್ರ' ಕೈಪಿಡಿಯನ್ನು ಮುಖ್ಯಮಂತ್ರಿಯವರು ಬಿಡುಗಡೆಗೊಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕೈಪಿಡಿ ಬಿಡುಗಡೆಗೊಳಿಸಿದ ಯಡಿಯೂರಪ್ಪ ಸಾರಿಗೆ ಇಲಾಖೆ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಸಾರಿಗೆ ಸಚಿವರೂ ಆದ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ, ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯ ಭಾಸ್ಕರ್, ಬಿಎಂಟಿಸಿ ಅಧ್ಯಕ್ಷ ನಂದೀಶ್ ರೆಡ್ಡಿ, ಸಾರಿಗೆ ಆಯುಕ್ತ ಶಿವಕುಮಾರ್ ಹಾಗೂ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಶಿವಯೋಗಿ ಕಳಸದ ಇತರರು ಉಪಸ್ಥಿತರಿದ್ದರು.

**ಇಲಾಖೆಯ ವರ್ಷದ ಸಾಧನೆಯ ಪ್ರಮುಖಾಂಶಗಳು:** ಆರು ತಿಂಗಳಿನಿಂದ ಕೋವಿಡ್-19 ಕಾಡಲಾರಂಭಿಸಿದ್ದರು ಸಾರಿಗೆ ಇಲಾಖೆ ಹಲವು ಯೋಜನೆಗಳನ್ನು ಜಾರಿಗೊಳಿಸಿ ಸ್ಪಂದಿಸಿದೆ. ಲಾಕ್‌ಡೌನ್ ಸಂದರ್ಭದಲ್ಲಿ ಲಕ್ಷಾಂತರ ಮಂದಿ ವಲಸೆ ಕಾರ್ಮಿಕರಿಗೆ ಸಾರಿಗೆ ಸೇವೆ ಒದಗಿಸಲಾಯಿತು. ಲಾಕ್‌ಡೌನ್‌ನಿಂದ ಸಂಕಷ್ಟಕ್ಕೆ ಸಿಲುಕಿದ್ದ ಅರ್ಹ ಆಟೋರಿಕ್ಷಾ ಟ್ಯಾಕ್ಸಿ ಚಾಲಕರಿಗೆ ಒಂದು ಬಾರಿಯ ಪರಿಹಾರವಾಗಿ ರೂ.5000 ವಿತರಿಸಲಾಯಿತು. ಲಾಕ್‌ಡೌನ್ ಅವಧಿಯಲ್ಲಿ ಎಲ್ಲ ಪ್ರಯಾಣಿಕ, ಸರಕು ಸಾಗಣೆ ವಾಹನಗಳಿಗೆ ತೆರಿಗೆ ಪಾವತಿ ವಿನಾಯಿತಿ ನೀಡಲಾಯಿತು.

ಸಾರಿಗೆ ಇಲಾಖೆ ಹಾಗೂ ಸಾರಿಗೆ ಸಂಸ್ಥೆಗಳ ಸಿಬ್ಬಂದಿ ಕೊರೋನಾ ವಾರಿಯರ್‌ಗಳಂತೆ ಕಾರ್ಯನಿರ್ವಹಿಸಿ ಪ್ರಯಾಣಿಕರಿಗೆ ಸ್ಪಂದಿಸಿದರು. ಕೊರೋನಾದಿಂದ ಸಾಕಷ್ಟು ನಷ್ಟ ಅನುಭವಿಸಿದ್ದರೂ ಸಾರಿಗೆ ಸಿಬ್ಬಂದಿಗೆ ಮಾಸಿಕ ವೇತನ ಪಾವತಿಸಲಾಗುತ್ತಿದೆ. ಪೀಣ್ಯ ಬಸ್ ನಿಲ್ದಾಣವನ್ನು ಕೊರೋನಾ ಚಿಕಿತ್ಸಾ ಕೇಂದ್ರವನ್ನಾಗಿ ಪರಿವರ್ತಿಸಲಾಗಿದೆ. ಹಲವೆಡೆ ಸಾರಿಗೆ ಬಸ್‌ಗಳನ್ನು ಮೊಬೈಲ್ ಚಿಕಿತ್ಸಾ ಘಟಕಗಳನ್ನಾಗಿ ಪರಿವರ್ತಿಸಲಾಗಿದೆ.

ಬೆಂಗಳೂರಿನಲ್ಲಿ ಮೊದಲ ಬಾರಿಗೆ ಪ್ರಾಯೋಗಿಕವಾಗಿ ಬಿಎಂಟಿಸಿ ಬಸ್‌ಗಳಿಗೆ ಪ್ರತ್ಯೇಕ ಪಥ ವ್ಯವಸ್ಥೆ ಜಾರಿಗೊಳಿಸಲಾಗಿದೆ. ಬಿಎಂಟಿಸಿಯ ಆಯ್ದ 100 ಬಸ್‌ಗಳಿಗೆ ಬೈಸಿಕಲ್‌ಗಳನ್ನು ಅಳವಡಿಸುವ ರ್‍ಯಾಕ್ ವ್ಯವಸ್ಥೆ ಕಲ್ಪಿಸಲು ನಿರ್ಧರಿಸಿದ್ದು, ಕೆಲ ಬಸ್‌ಗಳಿಗೆ ಪ್ರಾಯೋಗಿಕವಾಗಿ ಅಳವಡಿಸಲಾಗಿದೆ. ಇತ್ತೀಚೆಗೆ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿದ್ದು ವಿಶೇಷ. ಹಲವೆಡೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಹಾಗೂ ಬಸ್‌ನಿಲ್ದಾಣಗಳನ್ನು ಹೊಸದಾಗಿ ನಿರ್ಮಿಸಲಾಗಿದೆ.

**ಉದ್ದೇಶಿತ ಪ್ರಮುಖ ಯೋಜನೆಗಳು:** ಪ್ರಯಾಣಿಕರಿಗೆ ಸುರಕ್ಷಿತ ಪ್ರಯಾಣ ವ್ಯವಸ್ಥೆ ಜೊತೆಗೆ ಕೊರಿಯರ್ ಸೇವೆ ಪ್ರಾರಂಭಿಸಲು ಇಲಾಖೆ ನಿರ್ಧರಿಸಿದೆ. ಆ ಮೂಲಕ ವಾರ್ಷಿಕ ರೂ.100 ಕೋಟಿ ನಿವ್ವಳ ಆದಾಯ ಹೆಚ್ಚಾಗಲಿದೆ ಎಂದು ನಿರೀಕ್ಷಿಸಿದೆ. ಪ್ರತಿಷ್ಠಿತ ಇಸ್ರೋ ಸಂಸ್ಥೆಯಿಂದ ತಂತ್ರಜ್ಞಾನ, ಮಾರ್ಗದರ್ಶನ ಪಡೆದು ಸಾರಿಗೆ ಸಂಸ್ಥೆಗಳಲ್ಲಿನ ಸೇವೆಯನ್ನು ಇನ್ನಷ್ಟು ಆಧುನಿಕರಣಗೊಳಿಸಲು ಉದ್ದೇಶಿಸಿದೆ. ಖರೀದಿ ವಿಭಾಗದಲ್ಲಿ ಸೋರಿಕೆ ತಡೆಗೆ ಇಸ್ರೋ ನೆರವಿನಿಂದ ನೂತನ ನಿಯಂತ್ರಣ ವ್ಯವಸ್ಥೆ ಅಳವಡಿಸಿಕೊಳ್ಳಲು ಮುಂದಾಗಿದೆ. ಜೊತೆಗೆ ಸಾರಿಗೆ ನಿಗಮಗಳು ಮತ್ತು ಸಾರಿಗೆ ಇಲಾಖೆ ಯೋಜನೆಗಳ ಮೇಲ್ವಿಚಾರಣೆಗಾಗಿ ಇಸ್ರೋ ಸಹಯೋಗದಲ್ಲಿ ಇಸ್ರೋ ಸಂಸ್ಥೆಯನ್ನು ಪ್ರಾಜೆಕ್ಟ್ ಮಾನಿಟರಿಂಗ್ ಕೇಂದ್ರವನ್ನಾಗಿ ನೇಮಿಸಲಾಗಿದೆ.

**ತಜ್ಞರ ಸಲಹಾ ಸಮಿತಿ:**-ಸಾರಿಗೆ ವ್ಯವಸ್ಥೆಯಲ್ಲಿ ಇನ್ನಷ್ಟು ದಕ್ಷತೆ ತರುವ ಸಲುವಾಗಿ ನಿವೃತ್ತ ಐಎಎಸ್, ಐಪಿಎಸ್ ಅಧಿಕಾರಿಗಳನ್ನು ಒಳಗೊಂಡ ತಜ್ಞರ ಸಮಿತಿ ರಚಿಸಿ ಸಲಹೆ, ಸೂಚನೆ ಪಡೆಯುವುದು ಅನಗತ್ಯ ಹೊರಗುತ್ತಿಗೆ ಆಧಾರಿತ ಯೋಜನೆಗಳನ್ನು ಸ್ಥಗಿತಗೊಳಿಸುವುದು. ನಿರ್ಭಯ ಯೋಜನೆಯಡಿ ಸಾರಿಗೆ ಬಸ್‌ಗಳಲ್ಲಿ ಸುರಕ್ಷತಾ ದೃಷ್ಟಿಯಿಂದ ಸಿಸಿಟಿವಿ/ಮೊಬೈಲ್ ಆ್ಯಪ್ ಅಳವಡಿಕೆಗೆ ಚಾಲನೆ, ಸಾರಿಗೆ ನಿಗಮಗಳಲ್ಲಿನ ಖಾಲಿ ನಿವೇಶನಗಳನ್ನು ಗುರುತಿಸಿ ಸಮೀಕ್ಷೆ ನಡೆಸಿ ಅವುಗಳಿಂದ ಆದಾಯ ಪಡೆಯುವ ರೂಪದಲ್ಲಿ ಬಳಸಿಕೊಳ್ಳುವ ಕಾರ್ಯಕ್ಕೆ ಒತ್ತು ನೀಡಲಾಗಿದೆ. ನಾನಾ ನಿಗಮಗಳಲ್ಲಿನ ಹೊಸ ಆಧುನಿಕ ಬಸ್‌ಗಳನ್ನು ಖರೀದಿಸಿ ಸೇವೆಗೆ ನೀಡಲಾಗಿದೆ. ಎಲೆಕ್ಟ್ರಿಕ್ ಬಸ್‌ಗಳನ್ನು ಮುಂದಿನ ದಿನಗಳಲ್ಲಿ ವ್ಯಾಪಕವಾಗಿ ಬಳಸಲು ಕ್ರಮ ಕೈಗೊಳ್ಳಲಾಗಿದೆ. ಚಾಲನಾ ಪರವಾನಿಗಿ ನೀಡುವ ಪ್ರಕ್ರಿಯೆಯನ್ನು ಇನ್ನಷ್ಟು ಸುಧಾರಿಸಿ ನಾನಾ ನಗರಗಳಲ್ಲಿ ಗಣಕೀಕೃತ ಚಾಲನಾ ಪರೀಕ್ಷಾಪಥ

ನಿರ್ಮಿಸಲಾಗಿದೆ. ಕರ್ನಾಟಕ ಒನ್ ಹಾಗೂ ಬೆಂಗಳೂರು ಒನ್ ಕೇಂದ್ರಗಳಲ್ಲಿ ಚಾಲನಾ ಪರವಾನಿಗಿ ಅರ್ಜಿ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗಿದೆ. ರಾಜ್ಯದಲ್ಲಿ ಸಂಚರಿಸುವ ವಾಹನಗಳಲ್ಲಿ ವೆಹಿಕಲ್ ಲೊಕೇಷನ್ ಟ್ರ್ಯಾಕಿಂಗ್ ವ್ಯವಸ್ಥೆ ಅಳವಡಿಸಲು ರೂ.20 ಕೋಟಿ ವೆಚ್ಚ ಮಾಡಲಾಗುತ್ತಿದೆ. ರಸ್ತೆ ಸುರಕ್ಷತಾ ಕ್ರಮ ಹಾಗೂ ಜನಜಾಗೃತಿ ಚಟುವಟಿಕೆಗಳ ಪರಿಣಾಮ ರಸ್ತೆ ಅಪಘಾತಗಳಲ್ಲಿ ಮೃತಪಟ್ಟವರ ಸಂಖ್ಯೆಯಲ್ಲಿ 940ರಷ್ಟು ಇಳಿಕೆಯಾಗಿದೆ. ಅಂದರೆ ಶೇ.25ರಷ್ಟು ಕಡಿಮೆಯಾದಂತಾಗಿದೆ ಎಂದು ಇಲಾಖೆ ತಿಳಿಸಿದೆ.

ಆಧಾರ:ಉದಯವಾಣಿ, ದಿನಾಂಕ:21.08.2020